ಮೃತರ ಕುಟುಂಬ ವರ್ಗದವರಿಗೆ ಕಳುಹಿಸಿಕೊಡಲಾಗುವುದು.

2. ಚುನಾವಣಾ ಪ್ರಸ್ತಾವ

ಅಧ್ಯಕ್ಷರು :– ಕಮಿಟಿಗೆ ಸಂಬಂಧಪಟ್ಟ ಹಾಗೆ ಚುನಾವಣಾ ಪ್ರಸ್ತಾವ ಇದೆ, ಅದನ್ನು ಮಾನ್ಯ ಕಾನೂನು ಸಚಿವರು ಹೇಳುತ್ತಾರೆ. ಅವರು ಚುನಾವಣಾ ಪ್ರಸ್ತಾವವನ್ನು ಮಂಡನೆ ಮಾಡುತ್ತಾರೆ.

ವಿಷಯ : ವಿಧಾನಸಭೆಯ ವಿವಿಧ ಸ್ಥಾಯಿ ಸಮಿತಿಗಳಿಗೆ ಸದಸ್ಯರನ್ನು ಚುನಾಯಿಸುವ ಪ್ರಸ್ತಾವ.

ಶ್ರೀ ಎಸ್. ಸುರೇಶ್ ಕುಮಾರ್ (ಕಾನೂನು, ನ್ಯಾಯ ಮತ್ತು ಮಾನವ ಹಕ್ಕುಗಳು, ಸಂಸದೀಯ ವ್ಯವಹಾರಗಳು ಮತ್ತು ಶಾಸನ ರಚನೆ ಹಾಗೂ ಪುರಸಭೆಗಳು ಮತ್ತು ಸ್ಥಳೀಯ ಸಂಸ್ಥೆಗಳ ಸಚಿವರು) :– ಮಾನ್ಯ ಅಧ್ಯಕ್ಷರೇ,

ಅ) ಕರ್ನಾಟಕ ವಿಧಾನಸಭೆಯ ಕಾರ್ಯವಿಧಾನ ಹಾಗೂ ನಡವಳಿಕೆಯ 265(1)ನೇ ನಿಯಮದ ಅನುಸಾರವಾಗಿ ಈ ಸಭೆ **ಸಾರ್ವಜನಿಕ ಲೆಕ್ಕಪತ್ರಗಳ ಸಮಿತಿಗೆ ಹದಿನೈದು ಜನ ಸದಸ್ಯರನ್ನು** ಚುನಾಯಿಸಬೇಕೆಂದು ಸೂಚಿಸುತ್ತೇನೆ.

ಆ) ಕರ್ನಾಟಕ ವಿಧಾನಸಭೆಯ ಕಾರ್ಯವಿಧಾನ ಹಾಗೂ ನಡವಳಿಕೆಯ 268(1)ನೇ ನಿಯಮದ ಅನುಸಾರವಾಗಿ ಈ ಸಭೆ **ಅಂದಾಜುಗಳ ಸಮಿತಿಗೆ ಹದಿನೆಂಟು ಜನ ಸದಸ್ಯರನ್ನು** ಚುನಾಯಿಸಬೇಕೆಂದು ಸೂಚಿಸುತ್ತೇನೆ.

ಇ) ಕರ್ನಾಟಕ ವಿಧಾನಸಭೆಯ ಕಾರ್ಯವಿಧಾನ ಹಾಗೂ ನಡವಳಿಕೆಯ 271(1)ನೇ ನಿಯಮದ ಅನುಸಾರವಾಗಿ ಈ ಸಭೆ **ಸಾರ್ವಜನಿಕ ಉದ್ದಿಮೆಗಳ ಸಮಿತಿಗೆ ಹದಿನೈದು ಜನ ಸದಸ್ಯರನ್ನು** ಚುನಾಯಿಸಬೇಕೆಂದು ಸೂಚಿಸುತ್ತೇನೆ.

ಈ) ಕರ್ನಾಟಕ ವಿಧಾನಸಭೆಯ ಕಾರ್ಯವಿಧಾನ ಹಾಗೂ ನಡವಳಿಕೆಯ 272(1)ನೇ ನಿಯಮದ ಅನುಸಾರವಾಗಿ ಈ ಸಭೆ **ಹಕ್ಕು ಬಾಧ್ಯತೆಗಳ ಸಮಿತಿಗೆ ಒಂಭತ್ತು ಜನ ಸದಸ್ಯರನ್ನು** ಚುನಾಯಿಸಬೇಕೆಂದು ಸೂಚಿಸುತ್ತೇನೆ.

ಉ) ಕರ್ನಾಟಕ ವಿಧಾನಸಭೆಯ ಕಾರ್ಯವಿಧಾನ ಹಾಗೂ ನಡವಳಿಕೆಯ 277(1)ನೇ ನಿಯಮದ ಅನುಸಾರವಾಗಿ ಈ ಸಭೆ **ಅಧೀನ ಶಾಸನ ರಚನಾ ಸಮಿತಿಗೆ**

ಹದಿನೈದು ಜನ ಸದಸ್ಯರನ್ನು ಚುನಾಯಿಸಬೇಕೆಂದು ಸೂಚಿಸುತ್ತೇನೆ.

ಊ) ಕರ್ನಾಟಕ ವಿಧಾನಸಭೆಯ ಕಾರ್ಯವಿಧಾನ ಹಾಗೂ ನಡವಳಿಕೆಯ 281ನೇ ನಿಯಮದ ಅನುಸಾರವಾಗಿ ಈ ಸಭೆ **ಸರ್ಕಾರಿ ಭರವಸೆಗಳ ಸಮಿತಿಗೆ ಹದಿನೈದು ಜನ ಸದಸ್ಯರನ್ನು** ಚುನಾಯಿಸಬೇಕೆಂದು ಸೂಚಿಸುತ್ತೇನೆ.

ಋ) ಕರ್ನಾಟಕ ವಿಧಾನಸಭೆಯ ಕಾರ್ಯವಿಧಾನ ಹಾಗೂ ನಡವಳಿಕೆಯ 283(1)ನೇ ನಿಯಮದ ಅನುಸಾರವಾಗಿ ಈ ಸಭೆ **ಖಾಸಗಿ ಸದಸ್ಯರ ವಿಧೇಯಕಗಳು ಹಾಗೂ ನಿರ್ಣಯಗಳ ಸಮಿತಿಗೆ ಹತ್ತು ಜನ ಸದಸ್ಯರನ್ನು** ಚುನಾಯಿಸಬೇಕೆಂದು ಸೂಚಿಸುತ್ತೇನೆ.

ಎ) ಕರ್ನಾಟಕ ವಿಧಾನಸಭೆಯ ಕಾರ್ಯವಿಧಾನ ಹಾಗೂ ನಡವಳಿಕೆಯ 286ನೇ ನಿಯಮದ ಅನುಸಾರವಾಗಿ ಈ ಸಭೆ **ಅನುಸೂಚಿತ ಜಾತಿ ಮತ್ತು ಅನುಸೂಚಿತ ಪಂಗಡಗಳ ಕಲ್ಯಾಣ ಸಮಿತಿಗೆ ಹದಿನೈದು ಜನ ಸದಸ್ಯರನ್ನು** ಚುನಾಯಿಸಬೇಕೆಂದು ಸೂಚಿಸುತ್ತೇನೆ.

ಏ) ಕರ್ನಾಟಕ ವಿಧಾನಸಭೆಯ ಕಾರ್ಯವಿಧಾನ ಹಾಗೂ ನಡವಳಿಕೆಯ 288ನೇ ನಿಯಮದ ಅನುಸಾರವಾಗಿ ಈ ಸಭೆ **ಹಿಂದುಳಿದ ವರ್ಗಗಳ ಮತ್ತು ಅಲ್ಪಸಂಖ್ಯಾತರ ಕಲ್ಯಾಣ ಸಮಿತಿಗೆ ಹದಿನೈದು ಜನ ಸದಸ್ಯರನ್ನು** ಚುನಾಯಿಸಬೇಕೆಂದು ಸೂಚಿಸುತ್ತೇನೆ.

ಐ) ಕರ್ನಾಟಕ ವಿಧಾನಸಭೆಯ ಕಾರ್ಯವಿಧಾನ ಹಾಗೂ ನಡವಳಿಕೆಯ 370(2)ನೇ ನಿಯಮದ ಅನುಸಾರವಾಗಿ ಈ ಸಭೆ **ಸದನ ಸಮಿತಿ (ವಸತಿ ಸೌಕರ್ಯಗಳ ಸಮಿತಿ)ಗೆ ಹನ್ನೆರಡು ಜನ ಸದಸ್ಯರನ್ನು** ಚುನಾಯಿಸಬೇಕೆಂದು ಸೂಚಿಸುತ್ತೇನೆ.

ಒ) 1994ನೇ ಇಸವಿಯ ಕರ್ನಾಟಕ ರಾಜೀವ್ ಗಾಂಧಿ ಆರೋಗ್ಯ ವಿಜ್ಞಾನಗಳ ವಿಶ್ವವಿದ್ಯಾನಿಲಯಗಳ ಅಧಿನಿಯಮ ಕಲಂ 2(1) (vii)ರ ಮೇರೆಗೆ ಏಕಲ ಸಂಕ್ರಮಣೀಯ ಮತದ ಮೂಲಕ ಅನುಪಾತ ಪ್ರಾತಿನಿಧ್ಯದ ನೀತಿಗೆ ಅನುಸಾರವಾಗಿ ಈ ಸಭೆಯು **ರಾಜೀವ್ ಗಾಂಧಿ ಆರೋಗ್ಯ ವಿಜ್ಞಾನಗಳ ವಿಶ್ವವಿದ್ಯಾನಿಲಯದ ಸೆನೆಟ್‌ಗೆ ಮೂರು ಜನ ಸದಸ್ಯರನ್ನು** ಚುನಾಯಿಸಬೇಕೆಂದು ಸೂಚಿಸುತ್ತೇನೆ.

ಅಧ್ಯಕ್ಷರು :– ಪ್ರಸ್ತಾವ ಏನೆಂದರೆ,

ಅ) ಕರ್ನಾಟಕ ವಿಧಾನಸಭೆಯ ಕಾರ್ಯವಿಧಾನ ಹಾಗೂ ನಡವಳಿಕೆಯ 265(1)ನೇ ನಿಯಮದ ಅನುಸಾರವಾಗಿ ಈ ಸಭೆ **ಸಾರ್ವಜನಿಕ ಲೆಕ್ಕಪತ್ರಗಳ ಸಮಿತಿಗೆ**

ಹದಿನೈದು ಜನ ಸದಸ್ಯರನ್ನು ಚುನಾಯಿಸುವುದು.

ಆ) ಕರ್ನಾಟಕ ವಿಧಾನಸಭೆಯ ಕಾರ್ಯವಿಧಾನ ಹಾಗೂ ನಡವಳಿಕೆಯ 268(1)ನೇ ನಿಯಮದ ಅನುಸಾರವಾಗಿ ಈ ಸಭೆ **ಅಂದಾಜುಗಳ ಸಮಿತಿಗೆ ಹದಿನೆಂಟು ಜನ ಸದಸ್ಯರನ್ನು** ಚುನಾಯಿಸುವುದು.

ಇ) ಕರ್ನಾಟಕ ವಿಧಾನಸಭೆಯ ಕಾರ್ಯವಿಧಾನ ಹಾಗೂ ನಡವಳಿಕೆಯ 271(1)ನೇ ನಿಯಮದ ಅನುಸಾರವಾಗಿ ಈ ಸಭೆ **ಸಾರ್ವಜನಿಕ ಉದ್ದಿಮೆಗಳ ಸಮಿತಿಗೆ ಹದಿನೈದು ಜನ ಸದಸ್ಯರನ್ನು** ಚುನಾಯಿಸುವುದು.

ಈ) ಕರ್ನಾಟಕ ವಿಧಾನಸಭೆಯ ಕಾರ್ಯವಿಧಾನ ಹಾಗೂ ನಡವಳಿಕೆಯ 272(1)ನೇ ನಿಯಮದ ಅನುಸಾರವಾಗಿ ಈ ಸಭೆ **ಹಕ್ಕು ಬಾಧ್ಯತೆಗಳ ಸಮಿತಿಗೆ ಒಂಭತ್ತು ಜನ ಸದಸ್ಯರನ್ನು** ಚುನಾಯಿಸುವುದು.

ಉ) ಕರ್ನಾಟಕ ವಿಧಾನಸಭೆಯ ಕಾರ್ಯವಿಧಾನ ಹಾಗೂ ನಡವಳಿಕೆಯ 277(1)ನೇ ನಿಯಮದ ಅನುಸಾರವಾಗಿ ಈ ಸಭೆ **ಅಧೀನ ಶಾಸನ ರಚನಾ ಸಮಿತಿಗೆ ಹದಿನೈದು ಜನ ಸದಸ್ಯರನ್ನು** ಚುನಾಯಿಸುವುದು.

ಊ) ಕರ್ನಾಟಕ ವಿಧಾನಸಭೆಯ ಕಾರ್ಯವಿಧಾನ ಹಾಗೂ ನಡವಳಿಕೆಯ 281ನೇ ನಿಯಮದ ಅನುಸಾರವಾಗಿ ಈ ಸಭೆ **ಸರ್ಕಾರಿ ಭರವಸೆಗಳ ಸಮಿತಿಗೆ ಹದಿನೈದು ಜನ ಸದಸ್ಯರನ್ನು** ಚುನಾಯಿಸುವುದು.

ಋ) ಕರ್ನಾಟಕ ವಿಧಾನಸಭೆಯ ಕಾರ್ಯವಿಧಾನ ಹಾಗೂ ನಡವಳಿಕೆಯ 283(1)ನೇ ನಿಯಮದ ಅನುಸಾರವಾಗಿ ಈ ಸಭೆ **ಖಾಸಗಿ ಸದಸ್ಯರ ವಿಧೇಯಕಗಳು ಹಾಗೂ ನಿರ್ಣಯಗಳ ಸಮಿತಿಗೆ ಹತ್ತು ಜನ ಸದಸ್ಯರನ್ನು** ಚುನಾಯಿಸುವುದು.

ಎ) ಕರ್ನಾಟಕ ವಿಧಾನಸಭೆಯ ಕಾರ್ಯವಿಧಾನ ಹಾಗೂ ನಡವಳಿಕೆಯ 286ನೇ ನಿಯಮದ ಅನುಸಾರವಾಗಿ ಈ ಸಭೆ **ಅನುಸೂಚಿತ ಜಾತಿ ಮತ್ತು ಅನುಸೂಚಿತ ಪಂಗಡಗಳ ಕಲ್ಯಾಣ ಸಮಿತಿಗೆ ಹದಿನೈದು ಜನ ಸದಸ್ಯರನ್ನು** ಚುನಾಯಿಸುವುದು.

ಏ) ಕರ್ನಾಟಕ ವಿಧಾನಸಭೆಯ ಕಾರ್ಯವಿಧಾನ ಹಾಗೂ ನಡವಳಿಕೆಯ 288ನೇ ನಿಯಮದ ಅನುಸಾರವಾಗಿ ಈ ಸಭೆ **ಹಿಂದುಳಿದ ವರ್ಗಗಳ ಮತ್ತು ಅಲ್ಪಸಂಖ್ಯಾತರ**

ಕಲ್ಯಾಣ ಸಮಿತಿಗೆ ಹದಿನೈದು ಜನ ಸದಸ್ಯರನ್ನು ಚುನಾಯಿಸುವುದು.

ಐ) ಕರ್ನಾಟಕ ವಿಧಾನಸಭೆಯ ಕಾರ್ಯವಿಧಾನ ಹಾಗೂ ನಡವಳಿಕೆಯ 370(2)ನೇ ನಿಯಮದ ಅನುಸಾರವಾಗಿ ಈ ಸಭೆ **ಸದನ ಸಮಿತಿ (ವಸತಿ ಸೌಕರ್ಯಗಳ ಸಮಿತಿ)ಗೆ ಹನ್ನೆರಡು ಜನ ಸದಸ್ಯರನ್ನು** ಚುನಾಯಿಸುವುದು.

ಒ) 1994ನೇ ಇಸವಿಯ ಕರ್ನಾಟಕ ರಾಜೀವ್ ಗಾಂಧಿ ಆರೋಗ್ಯ ವಿಜ್ಞಾನಗಳ ವಿಶ್ವವಿದ್ಯಾನಿಲಯಗಳ ಅಧಿನಿಯಮ ಕಲಂ 2(1) (vii)ರ ಮೇರೆಗೆ ಏಕಲ ಸಂಕ್ರಮಣೀಯ ಮತದ ಮೂಲಕ ಅನುಪಾತ ಪ್ರಾತಿನಿಧ್ಯದ ನೀತಿಗೆ ಅನುಸಾರವಾಗಿ ಈ ಸಭೆಯು **ರಾಜೀವ್ ಗಾಂಧಿ ಆರೋಗ್ಯ ವಿಜ್ಞಾನಗಳ ವಿಶ್ವವಿದ್ಯಾನಿಲಯದ ಸೆನೆಟ್‌ಗೆ ಮೂರು ಜನ ಸದಸ್ಯರನ್ನು** ಚುನಾಯಿಸುವುದು.

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು

3. ನಿಲುವಳಿ ಸೂಚನೆ ಮಂಡನೆಗೆ ಅನುವತಿ ಕೋರಿ ಚರ್ಚೆ

ವಿಷಯ : ರಾಜ್ಯದಲ್ಲಿ ಉಂಟಾಗಿರುವ ರಸಗೊಬ್ಬರದ ತೀವ್ರ ಅಭಾವದ ಬಗ್ಗೆ.

ಶ್ರೀ ಮಲ್ಲಿಕಾರ್ಜುನ ಖರ್ಗೆ (ವಿರೋಧ ಪಕ್ಷದ ನಾಯಕರು) :– ಸನ್ಮಾನ್ಯ ಅಧ್ಯಕ್ಷರೇ, ವಿಧಾನಸಭೆಯ ಕಾರ್ಯವಿಧಾನ ಹಾಗೂ ನಡವಳಿಕೆಯ ನಿಯಮ 60ರ ಮೇರೆಗೆ ಒಂದು ನಿಲುವಳಿ ಸೂಚನೆಯನ್ನು ತಮಗೆ ಕೊಟ್ಟಿದ್ದೇವೆ. ಈ ನಿಲುವಳಿ ಸೂಚನೆ ಬಹಳ ಮಹತ್ವದ್ದು, ಜರೂರು ಮತ್ತು ಇತ್ತೀಚೆಗೆ ನಡೆದಂತಹ ಘಟನೆಗಳು, ಇವೆಲ್ಲಾ ವಿಚಾರಗಳನ್ನು ಕೂಡ ರೂಲ್ 60ರ ಪ್ರಕಾರ ತೆಗೆದುಕೊಳ್ಳುವುದಕ್ಕೆ ಅರ್ಹವಾದಂತಹ ನಿಲುವಳಿ ಸೂಚನೆ ಎನ್ನುವ ಮಾತನ್ನು ಹೇಳುತ್ತೇನೆ. ಇತ್ತೀಚೆಗೆ ರಾಜ್ಯದಲ್ಲಿ ಉಂಟಾಗಿರುವ ರಸಗೊಬ್ಬರದ ತೀವ್ರ ಅಭಾವದ ಬಗ್ಗೆ ರೈತರು ರಸ್ತೆಗಿಳಿದು ನಡೆಸುತ್ತಿದ್ದ ಹೋರಾಟವನ್ನು ಲಘುವಾಗಿ ಪರಿಗಣಿಸಿ, ಈ ಬಗ್ಗೆ ಸರ್ಕಾರ ತಾಳಿದ ನಿರ್ಲಕ್ಷ್ಯದಿಂದಾಗಿ ಹೋರಾಟ ಗಂಭೀರ ಸ್ವರೂಪಕ್ಕೆ ತಿರುಗಿ, ಹಸಿರು ಶಾಲು ಹೊದ್ದು ರೈತರ ಹೆಸರಿನಲ್ಲಿ ಪ್ರಮಾಣ ವಚನ ಸ್ವೀಕರಿಸಿದ ಸರ್ಕಾರ ಅಸಹಾಯಕ ರೈತರ ಮೇಲೆ ಗೋಲಿಬಾರ್ ಮಾಡಿದ್ದು ಸಾವು ನೋವುಗಳಿಗೆ ಕಾರಣವಾಗಿದೆ. ಈಗಲೂ ರೈತರು ಹೋರಾಟವನ್ನು ಮುಂದುವರಿಸಿಕೊಂಡೇ ಇರುವುದಲ್ಲದೆ ರಸಗೊಬ್ಬರದ ತೀವ್ರ ಅಭಾವದಿಂದಾಗಿ ಹತಾಶರಾದ ರೈತರು ಸರಣಿ